**Bangalore**
**Regional News**
**29.04.2026 / 2.30 P.M.**
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಮಂಡ್ಯ ಜಿಲ್ಲೆಯ ಕೆ.ಆರ್.ಪೇಟೆಯಲ್ಲಿ ಅಕ್ರಮ ಭ್ರೂಣ ಲಿಂಗಪತ್ತೆ ಪ್ರಕರಣ ; ಮೂವರು ವೈದ್ಯರ ಬಂಧನ ; ಉಳಿದ ಆರೋಪಿಗಳಿಗಾಗಿ ಶೋಧ

2. ರಾಜ್ಯದೆಲ್ಲೆಡೆ ಕುಡಿಯುವ ನೀರಿಗೆ ಹಾಹಾಕಾರ - ಪರಿಸ್ಥಿತಿ ನಿಭಾಯಿಸುವಲ್ಲಿ ಸರ್ಕಾರ ವಿಫಲ ; ಬಿಜೆಪಿ ಆರೋಪ

3. ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರ ಉಪಚುನಾವಣೆಯ ಮತ ಎಣಿಕೆಗೆ ಚುನಾವಣಾ ಆಯೋಗದಿಂದ ಸಿದ್ಧತೆ ಪೂರ್ಣ

4. ರಾಜ್ಯದ ಮಲೆನಾಡು ಮತ್ತು ದಕ್ಷಿಣ ಒಳನಾಡು ಜಿಲ್ಲೆಗಳಲ್ಲಿ ಇಂದು ಮಳೆಯಾಗುವ ಸಾಧ್ಯತೆ ; ಹವಾಮಾನ ಇಲಾಖೆ ಮುನ್ಸೂಚನೆ

<><><><>

ಮಂಡ್ಯ ಜಿಲ್ಲೆಯಲ್ಲಿ ಅಪ್ರಾಪ್ತ ಗರ್ಭಿಣಿಯರ ಅಕ್ರಮ ಭ್ರೂಣ ಲಿಂಗಪತ್ತೆ ಜಾಲ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ವೈದ್ಯರನ್ನು ಬಂಧಿಸಲಾಗಿದೆ. ಪರಾರಿಯಾಗಿರುವ ಸ್ತ್ರೀರೋಗ ತಜ್ಞರಿಗಾಗಿ ಪೊಲೀಸರು ಶೋಧಕಾರ್ಯ ತೀವ್ರಗೊಳಿಸಿದ್ದಾರೆ. ಮಂಡ್ಯ ಜಿಲ್ಲೆಯ ಕೆ.ಆರ್.ಪೇಟೆ ಪಟ್ಟಣದ ರೋಗ ನಿರ್ಣಯ ಕೇಂದ್ರಗಳಲ್ಲಿ ಅಕ್ರಮ ಲಿಂಗ ಪತ್ತೆ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ ಎಂಬ ಆರೋಪ ಕೇಳಿ ಬಂದಿತ್ತು. ಈ ಹಿನ್ನೆಲೆಯಲ್ಲಿ ಪರಿಶೀಲನೆ ನಡೆಸಿದ ಪೋಲಿಸರಿಗೆ ಎರಡು ಡಯಾಗ್ನೋಸ್ಟಿಕ್ ಸೆಂಟರ್‌ಗಳಲ್ಲಿ ೨೪ ಸ್ಕ್ಯಾನ್‌ಗಳನ್ನು ನಡೆಸಲಾಗಿದೆ ಎಂದು ತಿಳಿದುಬಂದಿದೆ. ಒಟ್ಟು ೧೭ ಆರೋಪಿಗಳ ವಿರುದ್ಧ ಕೆ.ಆರ್.ಪೇಟೆ ಮತ್ತು ಕೆ.ಆರ್.ಪೇಟೆ ಗ್ರಾಮೀಣಾ ಪೊಲೀಸ್ ಠಾಣೆಗಳಲ್ಲಿ ೧೨ ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ. ಆರೋಪಿಗಳಲ್ಲಿ ಸರ್ಕಾರಿ ವೈದ್ಯರು, ಕಿರಿಯ ಆರೋಗ್ಯ ಸಹಾಯಕರು, ಆಶಾ ಕಾರ್ಯಕರ್ತೆಯರು ಸೇರಿದ್ದಾರೆ. ಲೋಕಾಯುಕ್ತ ಅಧಿಕಾರಿಗಳು ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದು, ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡಿದ್ದಾರೆ.

<><><><>

ರಾಜ್ಯಾದ್ಯಂತ ತೀವ್ರ ಬಿಸಿಲಿನ ವಾತಾವರಣ ಮತ್ತು ನೀರಿನ ಕೊರತೆ ರೈತರನ್ನು ಹೈರಾಣಾಗಿಸಿದೆ. ಆದರೆ ರಾಜ್ಯ ಸರ್ಕಾರ ರೈತರನ್ನು ಸಂಪೂರ್ಣವಾಗಿ ನಿರ್ಲಕ್ಷಿಸಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಲವಾರು ಪ್ರದೇಶಗಳಲ್ಲಿ ಕುಡಿಯುವ ನೀರಿನ ಕೊರತೆ ಉಂಟಾಗಿದೆ ಎಂದು ತಿಳಿಸಿದ್ದಾರೆ. ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ಮತ್ತು ನಿಪ್ಪಾಣಿಯ ಕೆಲವು ಭಾಗಗಳಲ್ಲಿ ಸುಮಾರು ಶೇಕಡ ೨೦ರಷ್ಟು ಕಬ್ಬಿನ ಬೆಳೆಗಳು ಬಿಸಿಲಿನಿಂದ ಹಾನಿಗೊಳಗಾಗಿದೆ. ಗದಗ ಜಿಲ್ಲೆಯ ೭೬ಕ್ಕೂ ಹೆಚ್ಚು ಹಳ್ಳಿಗಳ ಜನರು ಕುಡಿಯುವ ನೀರಿನ ಕೊರತೆ ಎದುರಿಸುತ್ತಿದ್ದಾರೆ ಎಂದು ಹೇಳಿದ್ದಾರೆ. ರೈತರ ಉಳಿವಿಗಾಗಿ ಹೋರಾಡಬೇಕಿದ್ದ ಸರ್ಕಾರ ಅಧಿಕಾರಕ್ಕಾಗಿ ಆಂತರಿಕ ರಾಜಕೀಯ ವಿವಾದಗಳಲ್ಲಿ ನಿರತವಾಗಿದೆ ಎಂದು ಆರೋಪಿಸಿದ್ದಾರೆ.

<><><><>

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಮತ ಎಣಿಕೆ ಕಾರ್ಯ ಮೇ ೪ ರಂದು ನಗರದ ಡಿ.ಆರ್.ಆರ್. ವಿದ್ಯಾಸಂಸ್ಥೆಯಲ್ಲಿ ನಡೆಯಲಿದ್ದು, ಜಿಲ್ಲಾಡಳಿತವು ಅಗತ್ಯ ಸಿದ್ಧತೆಗಳನ್ನು ಪೂರ್ಣಗೊಳಿಸಿದೆ ಎಂದು ಚುನಾವಣಾಧಿಕಾರಿ ಸಂತೋಷ್‌ಕುಮಾರ್ ತಿಳಿಸಿದ್ದಾರೆ. ಬೆಳಿಗ್ಗೆ ೮ ಗಂಟೆಗೆ ಅಂಚೆ ಮತಗಳು ಹಾಗೂ ೮:೩೦ ರಿಂದ ಇವಿಎಂ ಮತಗಳ ಎಣಿಕೆ ಆರಂಭವಾಗಲಿದೆ. ಒಟ್ಟು ೧೪ ಟೇಬಲ್‌ಗಳಲ್ಲಿ ಎಣಿಕೆ ನಡೆಯಲಿದೆ. ಎಣಿಕೆ ಕೇಂದ್ರದ ಸುತ್ತ ಕೇಂದ್ರ ಸಶಸ್ತ್ರ ಪೊಲೀಸ್ ಪಡೆ ಡಿಎಆರ್ ಹಾಗೂ ಸ್ಥಳೀಯ ಪೊಲೀಸರಿಂದ ೩ ಹಂತದ ಬಿಗಿ ಭದ್ರತೆ ಏರ್ಪಡಿಸಲಾಗಿದೆ ಎಂದು ತಿಳಿಸಿದ್ದಾರೆ. ಕಾಂಗ್ರೆಸ್ ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ ಅವರ ನಿಧನದಿಂದ ತೆರವಾಗಿದ್ದ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಕ್ಕೆ ಏಪ್ರಿಲ್ ೯ ರಂದು ಮತದಾನ ನಡೆದಿತ್ತು.

<><><><>

ಧಾರವಾಡ ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ತಾಪಮಾನ ತೀವ್ರವಾಗಿ ಹೆಚ್ಚಾಗುತ್ತಿದ್ದು, ಜಿಲ್ಲೆಯಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಕರ್ನಾಟಕ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಸಂಸ್ಥೆ, ಹುಬ್ಬಳ್ಳಿ ಆಸ್ಪತ್ರೆಯಲ್ಲಿ ೧೪ ಹಾಸಿಗೆಗಳ ಸುಸಜ್ಜಿತ, ವಾರ್ಡ್ ತೆರೆದಿದೆ. ಮುನ್ನೆಚ್ಚರಿಕೆ ಕ್ರಮವಾಗಿ 'ಹೀಟ್ ಸ್ಟ್ರೋಕ್' ವಾರ್ಡ್ ತೆರೆಯಲಾಗಿದ್ದು, ಇದರಲ್ಲಿ ವೆಂಟಿಲೇಟರ್ ವ್ಯವಸ್ಥೆ ಮಾಡಲಾಗಿದೆ. ಜಿಲ್ಲೆಯಲ್ಲಿ ಈವರೆಗೂ ಯಾವುದೇ ಗಂಭೀರ ಪ್ರಕರಣಗಳು ದಾಖಲಾಗಿಲ್ಲ. ಆದರೂ ಮಕ್ಕಳು, ವೃದ್ಧರು ಹಾಗೂ ಗರ್ಭಿಣಿಯರು ವಿಶೇಷ ಕಾಳಜಿವಹಿಸಬೇಕು ಎಂದು ಕರ್ನಾಟಕ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಸಂಸ್ಥೆ ಅಧೀಕ್ಷಕ, ಡಾ. ಈಶ್ವರ ಹಸಬಿ ಆಕಾಶವಾಣಿಗೆ ಹೆಚ್ಚಿನ ಮಾಹಿತಿ ನೀಡಿದ್ದಾರೆ.

ಧ್ವನಿ : ಅಧೀಕ್ಷಕ, ಡಾ. ಈಶ್ವರ ಹಸಬಿ

<><><><>

ಬೇಸಿಗೆಯ ತಾಪ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದ್ದು, ಇದರ ನೇರ ಪರಿಣಾಮ ತೋಟಗಾರಿಕಾ ಬೆಳೆಗಳ ಮೇಲೆ ಕಾಣಿಸಿಕೊಳ್ಳುತ್ತಿದ್ದು, ಈ ಹಿನ್ನೆಲೆಯಲ್ಲಿ ರೈತರು ಸೂಕ್ತ ಮುಂಜಾಗ್ರತಾ ಕ್ರಮ ಅನುಸರಿಸಬೇಕೆಂದು ಕೋಲಾರ ಜಿಲ್ಲಾ ತೋಟಗಾರಿಕೆ ಇಲಾಖೆ ಸಲಹೆ ನೀಡಿದೆ. ತೋಟಗಾರಿಕೆ ಬೆಳೆಗಳಿಗೆ ಪ್ರಮುಖ ಹಂತದಲ್ಲಿ ನೀರಿನ ಕೊರತೆ ಉಂಟಾದರೆ ಉತ್ಪಾದನೆ ಮೇಲೆ ದುಷ್ಪರಿಣಾಮ ಬೀರುತ್ತದೆ. ಹಾಗಾಗಿ, ಮುಂಜಾನೆ ಅಥವಾ ಸಂಜೆ ವೇಳೆ ನೀರು ಹಾಯಿಸುವುದು ಉತ್ತಮ. ಹನಿ ನೀರಾವರಿ ಪದ್ಧತಿ ಅಳವಡಿಸಿದರೆ ಕಡಿಮೆ ನೀರಿನಲ್ಲಿ ಹೆಚ್ಚು ಫಲಿತಾಂಶ ಪಡೆಯಬಹುದು ಹಾಗೂ ಮಣ್ಣಿನ ತೇವಾಂಶ ಸ್ಥಿರವಾಗಿಡಲು ಸಹಕಾರಿಯಾಗುತ್ತದೆ ಎಂದು ಹೇಳಿದೆ. ಮಾವು ಬೆಳೆಯಲ್ಲಿ ವಿಶೇಷವಾಗಿ ಗಮನ ಕೊಡಬೇಕಾಗಿದ್ದು, ಹೂವು ಬಿಟ್ಟಿರುವ ಸಮಯದಲ್ಲಿ ಯಾವುದೇ ಕಾರಣಕ್ಕೂ ನೀರಾವರಿ ನೀಡಬಾರದು. ಪರಾಗಸ್ಪರ್ಶ ಪೂರ್ಣಗೊಂಡು ಕಾಯಿ ಬಟಾಣಿ ಗಾತ್ರಕ್ಕೆ ಬಂದ ನಂತರ ಮಾತ್ರ ನೀರು ನೀಡುವುದು ಸೂಕ್ತ. ತರಕಾರಿ ಬೆಳೆಗಳಲ್ಲಿ ಹೆಚ್ಚಿದ ಉಷ್ಣತೆಯಿಂದ ಹೂವು ಮತ್ತು ಕಾಯಿಗಳ ಉದುರುವಿಕೆ ಹೆಚ್ಚಾಗಲಿದ್ದು, ಈ ವೇಳೆ ಕಡಿಮೆ ಪ್ರಮಾಣದಲ್ಲಿ ಹೆಚ್ಚು ಬಾರಿ ನೀರು ನೀಡುವುದು ಉತ್ತಮ ಎಂದು ತೋಟಗಾರಿಕೆ ಇಲಾಖೆ ಸಲಹೆ ನೀಡಿದೆ.

<><><><>

ಬಿಸಿಲಿನ ತಾಪ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು ಸಾರ್ವಜನಿಕರಿಗೆ ಕುಡಿಯುವ ನೀರಿನಲ್ಲಿ ಯಾವುದೇ ರೀತಿ ಸಮಸ್ಯೆಯಾಗದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಹಾಸನ ವಿಧಾನಸಭಾ ಕ್ಷೇತ್ರ ಶಾಸಕ ಸ್ವರೂಪ್ ಪ್ರಕಾಶ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಹಾಸನ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ತ್ರೈಮಾಸಿಕ ಕೆಡಿಪಿ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕರು, ಬೇಸಿಗೆಯಲ್ಲಿ ಜನರ ಆರೋಗ್ಯದ ಬಗ್ಗೆ ಹೆಚ್ಚು ಗಮನಹರಿಸಬೇಕಿದೆ. ತಾಲ್ಲೂಕಿನ ಎಲ್ಲಾ ಆಸ್ಪತ್ರೆಗಳಿಗೆ ಭೇಟಿ ನೀಡಿ ಯಾವ ಚಿಕಿತ್ಸೆಗೆ ಎಷ್ಟು ಹಣ ಎಂಬುದನ್ನು ನಾಮಫಲಕಗಳಲ್ಲಿ ಅಳವಡಿಸಬೇಕೆಂದು ಸೂಚಿಸಿದರು. ಕೃಷಿ ಮತ್ತು ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ರೈತರಿಗೆ ಆಲೂಗೆಡ್ಡೆ, ತರಕಾರಿ ಸೇರಿದಂತೆ ಇನ್ನಿತರ ಬೆಳೆಗಳನ್ನು ಬೆಳೆಯಲು ಪ್ರೋತ್ಸಾಹಿಸಬೇಕು. ವಿವಿಧ ಬೆಳೆಗಳನ್ನು ಬೆಳೆಯುವ ಬಗ್ಗೆ ಪ್ರಚಾರ ಕೈಗೊಳ್ಳಬೇಕೆಂದು ಹೇಳಿದರಲ್ಲದೆ, ಪುರದಮ್ಮ ರಸ್ತೆ ಕಿರಿದಾಗಿದ್ದು, ರಸ್ತೆ ನಿರ್ಮಾಣಕ್ಕೆ ಅರಣ್ಯ ಇಲಾಖೆಯಿಂದ ಅದಷ್ಟು ಬೇಗ ಸಮ್ಮತಿ ದೊರಯಬೇಕಿದೆ ಎಂದು ತಿಳಿಸಿದರು.

<><><><>

ಬೆಂಗಳೂರು ಸಹಕಾರ ಹಾಲು ಒಕ್ಕೂಟ- ಬಮೂಲ್ ನಿಂದ ತಿರುಪತಿ-ತಿರುಮಲ ದೇವಾಲಯಕ್ಕೆ ನಂದಿನಿ ತುಪ್ಪ ಸರಬರಾಜು ಕಾರ್ಯಕ್ರಮಕ್ಕೆ ಬಮೂಲ್ ಅಧ್ಯಕ್ಷ ಡಿ.ಕೆ. ಸುರೇಶ್ ಬೆಂಗಳೂರಿನ ಡೇರಿ ಆವರಣದಲ್ಲಿಂದು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು. ಈ ವೇಳೆ ಒಕ್ಕೂಟದ ನಿರ್ದೇಶಕರು, ಅಧಿಕಾರಿಗಳು ಉಪಸ್ಥಿತರಿದ್ದರು.

<><><>

ವಿಶೇಷಚೇತನರು ಸಮಾಜದ ಮುಖ್ಯವಾಹಿನಿಗೆ ಬರಲು ಪೂರಕ ವಾತಾವರಣ ಕಲ್ಪಿಸುವುದು ಸರ್ಕಾರದ ಆದ್ಯತೆಯಾಗಿದ್ದು, ಅವರ ಕುಂದುಕೊರತೆಗಳಿಗೆ ಅಧಿಕಾರಿಗಳು ವಿಳಂಬ ಮಾಡದೆ ತಕ್ಷಣ ಸ್ಪಂದಿಸಬೇಕು ಎಂದು ವಿಜಯನಗರ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದರು. ಹೊಸಪೇಟೆಯ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ವಿಶೇಷಚೇತನರ ಕುಂದು ಕೊರತೆ ಸಭೆಯಲ್ಲಿ ಮಾತನಾಡಿದ ಅವರು, ವಿಕಲಚೇತನರಿಗೆ ಸರ್ಕಾರದಿಂದ ಸಿಗಬೇಕಾದ ಮಾಸಾಶನ, ಸಾಧನ ಸಲಕರಣೆಗಳು ಹಾಗೂ ಬಸ್ ಪಾಸ್ ಇನ್ನಿತರ ಸೌಲಭ್ಯಗಳಲ್ಲಿ ಯಾವುದೇ ಲೋಪವಾಗದಂತೆ ಎಚ್ಚರ ವಹಿಸಲು ಸಂಬಂಧಪಟ್ಟ ಇಲಾಖೆಗಳು ಕಟ್ಟುನಿಟ್ಟಿನ ಕ್ರಮ ವಹಿಸಬೇಕೆಂದು ಸೂಚಿಸಿದರು.

<><><>

ಚಿಕ್ಕಬಳ್ಳಾಪುರ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ನೇತೃತ್ವದಲ್ಲಿ ಜಿಲ್ಲೆಯ ಗ್ರಾಮೀಣ ಭಾಗದ ೧೮೦ ಕಲ್ಯಾಣಿಗಳ ಸ್ವಚ್ಛತೆ ಮತ್ತು ಅಭಿವೃದ್ಧಿಗಾಗಿ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಇಂದು ಚಿಕ್ಕಬಳ್ಳಾಪುರ ತಾಲ್ಲೂಕಿನ ದಿಬ್ಬೂರು ಗ್ರಾಮದಲ್ಲಿ ನಡೆದ ಕಲ್ಯಾಣಿ ಸ್ವಚ್ಛತಾ ಶ್ರಮದಾನ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ. ಸುಧಾಕರ್ ಪಾಲ್ಗೊಂಡು ಕಲ್ಯಾಣಿಗಳೂ ಸೇರಿದಂತೆ ವಿವಿಧ ಜಲಮೂಲಗಳ ಸಂರಕ್ಷಣೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು. ಜಿಲ್ಲಾಧಿಕಾರಿ ಜಿ.ಪ್ರಭು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ವೈ.ನವೀನ್ ಭಟ್ ಮತ್ತಿತರ ಅಧಿಕಾರಿಗಳು ಭಾಗವಹಿಸಿದ್ದರು.

<><><>

ನೀಟ್ ಪರೀಕ್ಷೆಯು ಮೇ ೩ ರಂದು ಕಾರವಾರದ ಸರ್ಕಾರಿ ಕಲಾ ಮತ್ತು ವಿಜ್ಞಾನ ಪದವಿ ಕಾಲೇಜು ನಲ್ಲಿ ನಡೆಯಲಿದ್ದು, ಈ ಪರೀಕ್ಷೆಯು ಅತ್ಯಂತ ಪಾರದರ್ಶಕ ಮತ್ತು ವ್ಯವಸ್ಥಿತ ರೀತಿಯಲ್ಲಿ ಹಾಗೂ ಪರೀಕ್ಷಾ ಮಾರ್ಗಸೂಚಿಗಳ ಉಲ್ಲಂಘನೆಯಾಗದಂತೆ ಕರ್ತವ್ಯ ನಿರ್ವಹಿಸುವಂತೆ ಪರೀಕ್ಷಾ ಕರ್ತವ್ಯಕ್ಕೆ ನಿಯೋಜಿಸಿರುವ ಅಧಿಕಾರಿಗಳಿಗೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಸೂಚನೆ ನೀಡಿದರು. ಅವರು ಕಾರವಾರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ನಡೆಯುವ ನೀಟ್ ಪರೀಕ್ಷೆಗೆ ೪೮೮ ವಿದ್ಯಾರ್ಥಿಗಳು ಹಾಜರಾಗಲಿದ್ದು, ಪರೀಕ್ಷಾ ಕೇಂದ್ರದಲ್ಲಿ ವಿದ್ಯಾರ್ಥಿಗಳಿಗೆ ಆಸನ ವ್ಯವಸ್ಥೆ, ವಿದ್ಯುತ್, ಕುಡಿಯುವ

ನೀರು, ಶೌಚಾಲಯದಂತಹ ಮೂಲಸೌಕರ್ಯಗಳ ವ್ಯವಸ್ಥೆ ಇರುವುದನ್ನು ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಮುಂಚಿತವಾಗಿ ಪರಿಶೀಲಿಸಿ ಖಾತ್ರಿಪಡಿಸಿಕೊಳ್ಳಬೇಕು ಎಂದರು.

<><><><>

ರಾಜ್ಯದ ಕೆಲವು ಜಿಲ್ಲೆಗಳಲ್ಲಿ ಸಾಧಾರಣದಿಂದ ಭಾರಿ ಮಳೆಯಾದ ವರದಿಯಾಗಿದೆ. ಬಿರು ಬೇಸಿಗೆಯ ಬಿಸಿಲಿನ ಝಳಕ್ಕೆ ತತ್ತರಿಸಿದ್ದ ಜನರಿಗೆ ಈ ಮಳೆ ಸ್ವಲ್ಪಮಟ್ಟಿಗೆ ತಂಪೆರೆದಿದೆ. ರಾಜ್ಯದ ಮಲೆನಾಡು ಮತ್ತು ದಕ್ಷಿಣ ಒಳನಾಡು ಜಿಲ್ಲೆಗಳಲ್ಲಿ ಇಂದು ಸಾಧಾರಣ ಮಳೆ ಬೀಳುವ ಸಾಧ್ಯತೆಗಳಿವೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಶಿವಮೊಗ್ಗ, ಚಿಕ್ಕಮಗಳೂರು, ದಾವಣಗೆರೆ ಜಿಲ್ಲೆಗಳಲ್ಲಿ ಮಳೆ ಬೀಳುವ ಸಾಧ್ಯತೆಗಳಿದ್ದು, ಪ್ರತಿ ಗಂಟೆಗೆ ೪೦ ರಿಂದ ೫೦ ಕಿಲೋಮೀಟರ್ ವೇಗದಲ್ಲಿ ಗಾಳಿ ಬೀಸಲಿದೆ. ವಿಜಯಪುರ, ಬಾಗಲಕೋಟೆ, ಬೆಳಗಾವಿ, ಕಲಬುರಗಿ, ಯಾದಗಿರಿ, ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳ ಕೆಲವು ಪ್ರದೇಶಗಳಲ್ಲಿ ಮಳೆಯಾಗುವ ಸಾಧ್ಯತೆಗಳು ಹೆಚ್ಚಾಗಿದ್ದು, ಉಳಿದ ಜಿಲ್ಲೆಗಳಲ್ಲಿ ಒಣಹವೆ ಮುಂದುವರೆಯಲಿದೆ. ರಾಜಧಾನಿ ಬೆಂಗಳೂರು ಮತ್ತು ಸುತ್ತಮುತ್ತ ಪ್ರದೇಶಗಳಲ್ಲಿ ಒಣಹವೆ ಇರಲಿದ್ದು, ಕೆಲವೆಡೆ ಮೋಡ ಮುಸುಕಿದ ವಾತಾವರಣ ಇರಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>